Akashvani : Bangalore
National Bulletin In Kannada
15.06.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
15.06.2024 / 19.35 hrs

**<><*<><>*><>**

<u>ಮುಖ್ಯಾಂಶಗಳು</u>

೧. ಪಿಎಂ ಕಿಸಾನ್ ನಿಧಿ ಯೋಜನೆ; ೯ ಕೋಟಿ ೩ ಲಕ್ಷ ರೈತರ ಖಾತೆಗಳಿಗೆ ಬರುವ ಮಂಗಳವಾರ ೨೦ ಸಾವಿರ ಕೋಟಿ ರೂಪಾಯಿ ಹಣ ವರ್ಗಾವಣೆ

೨. ಜಿ-೭ ಶೃಂಗಸಭೆ; ಭಾರತದ ಪಾಲ್ಗೊಳ್ಳುವಿಕೆ ಫಲಪ್ರದ -ಪ್ರಧಾನಿ ನರೇಂದ್ರ ಮೋದಿ

೩. ಕೇಂದ್ರ ಸಾಹಿತ್ಯ ಅಕಾಡೆಮಿಯಿಂದ ಯುವ ಮತ್ತು ಬಾಲ ಸಾಹಿತ್ಯ ಪುರಸ್ಕಾರ ಘೋಷಣೆ

೪. ಹೆಸರಾಂತ ವನ್ಯಜೀವಿ ಚಿತ್ರ ನಿರ್ಮಾಪಕ ಸುಬ್ಬಯ್ಯ ನಲ್ಲಮುತ್ತು ಅವರಿಗೆ ಪ್ರತಿಷ್ಠಿತ ವಿ.ಶಾಂತರಾಮ್ ಜೀವಮಾನ ಸಾಧನೆ ಪ್ರಶಸ್ತಿ ಪ್ರಕಟ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದು ಭಾರತ- ಕೆನಡಾ ಮುಖಾಮುಖಿ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಬರುವ ಮಂಗಳವಾರ ೧೮ ರಂದು 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಲಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ, ಕೃಷಿ ಹಾಗೂ ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ವಿಷಯ ಪ್ರಕಟಿಸಿದ್ದಾರೆ. ಅವರು, ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ ಹತ್ತು ವರ್ಷಗಳಲ್ಲಿ ೧೧ ಕೋಟಿ ರೈತರ ಖಾತೆಗಳಿಗೆ ೩ ಲಕ್ಷ ಕೋಟಿ ರೂಪಾಯಿಗಳನ್ನು ಯೋಜನೆಯಡಿ ವರ್ಗಾಯಿಸಲಾಗಿದೆ ಎಂದು ಹೇಳಿದರು. ಜೂನ್ ೧೮ ರಂದು ವಾರಾಣಸಿಯಲ್ಲಿ ನಡೆಯಲಿರುವ ಪ್ರಧಾನಿಮಂತ್ರಿಯವರ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಎಲ್ಲ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವುದಾಗಿ ಅವರು ತಿಳಿಸಿದರು. ರೈತರ ಕಲ್ಯಾಣ ವಿಷಯಕ್ಕೆ ಸಂಬಂಧಿಸಿದ ಎಲ್ಲ

ವಿಚಾರಗಳ ಬಗ್ಗೆ ಅಧಿಕಾರಗಳೊಂದಿಗೆ ಚರ್ಚೆ ನಡೆಸಿರುವುದಾಗಿ ತಿಳಿಸಿದ ಅವರು, ಸರ್ಕಾರದ ೧೦೦ ದಿನಗಳ ಕಾರ್ಯ ಯೋಜನೆಯ ಬಗ್ಗೆ ಪರಿಶೀಲನೆ ನಡೆಸಿದ್ದಾಗಿ ಹೇಳಿದರು.

<><*<><>*><>

ಇಟಲಿಯಲ್ಲಿ ನಡೆದ ಜಿ-೭ ಶೃಂಗಸಭೆಯಲ್ಲಿ ಭಾರತದ ಪಾಲ್ಗೊಳ್ಳುವಿಕೆ ಫಲಪ್ರದವಾಗಿತ್ತು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಜಿ-೭ ಶೃಂಗಸಭೆ ಮುಖ್ಯವಾದ ಸಭೆಯಾಗಿದ್ದು, ವಿಶ್ವವೇದಿಕೆಯಲ್ಲಿ ಭಾರತದ ಮುನ್ನೋಟಗಳನ್ನು ಸಾದರಪಡಿಸಲಾಯಿತು ಎಂದು ಶೃಂಗಸಭೆಯಲ್ಲಿ ಪಾಲ್ಗೊಂಡು ದೆಹಲಿಗೆ ಹಿಂತಿರುಗಿದ ನಂತರ ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಪ್ರಧಾನಿ ಜಿ-೭ ಶೃಂಗಸಭೆಯಲ್ಲಿ ಮಾತನಾಡಿ, ತಂತ್ರಜ್ಞಾನ ಎಲ್ಲರ ಪ್ರಗತಿಯನ್ನು ವರ್ಧಿಸುವಂತಿರಬೇಕು. ಕೃತಕ ಬುದ್ಧಿಮತ್ತೆ ಕುರಿತಾದ ಜಾಗತಿಕ ಸಹಭಾಗಿತ್ವದ ಸ್ಥಾಪನಾ ಸದಸ್ಯ ರಾಷ್ಟ್ರವಾಗಿ ಅಂತಾರಾಷ್ಟ್ರೀಯ ಸಹಯೋಗ ಹೊಂದಲು ಭಾರತ ಒತ್ತು ನೀಡುತ್ತದೆ ಎಂದು ಹೇಳಿದ್ದಾರೆ. ಪ್ರಧಾನಿ ಅವರು ತಮ್ಮ ಇಟಲಿ ಭೇಟಿ ಸಂದರ್ಭದಲ್ಲಿ ಇಟಲಿ ಪ್ರಧಾನಿ ಮೆಲೋನಿ, ಬ್ರಿಟನ್ ಪ್ರಧಾನಿ ರಿಷಿ ಸುನಕ್, ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯಲ್ ಮ್ಯಾಕ್ರೋನ್ ಹಾಗೂ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೂ ದ್ವಿಪಕ್ಷೀಯ ಮಾತುಕತೆ ನಡೆಸಿದರು.

<><*<><>*><>

ಚೀನಾ ಅನುಸರಿಸುತ್ತಿದೆ ಎಂದು ಹೇಳಲಾದ ನ್ಯಾಯಯುತವಲ್ಲದ ವ್ಯಾಪಾರಿ ಅಭ್ಯಾಸಗಳನ್ನು ನಿಭಾಯಿಸುವುದಾಗಿ ಜಿ-೭ ಶೃಂಗಸಭೆ ತಿಳಿಸಿದೆ. ನಿನ್ನೆ ಇಟಲಿಯಲ್ಲಿ ಮುಕ್ತಾಯಗೊಂಡ ಜಿ-೭ ಶೃಂಗಸಭೆಯ ಜಂಟಿ ಹೇಳಿಕೆಯಲ್ಲಿ ಚೀನಾದ ಆರ್ಥಿಕ ಅಭಿವೃದ್ಧಿಗೆ ಧಕ್ಕೆ ಉಂಟುಮಾಡುವುದು ಉದ್ದೇಶವಲ್ಲ. ಆದರೆ, ನ್ಯಾಯಯುತವಲ್ಲದ ವ್ಯಾಪಾರಿ ಅಭ್ಯಾಸಗಳಿಂದ ರಕ್ಷಣೆ ಪಡೆಯುವ ಕ್ರಮಗಳನ್ನು ಮುಂದುವರೆಸಲಾಗುವುದು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಭಾರತ- ಮಧ್ಯಪೂರ್ವ-ಯೂರೋಪ್ ಆರ್ಥಿಕ ಕಾರಿಡಾರ್‌ಗಳಂತಹ ನಿರ್ದಿಷ್ಟ ಮೂಲಸೌಕರ್ಯ ಯೋಜನೆಗಳಿಗೆ ಬೆಂಬಲ ನೀಡುವುದಾಗಿ ಜಿ-೭ ದೇಶಗಳು ತಿಳಿಸಿವೆ. ಉಕ್ರೇನ್ ಯುದ್ಧಕ್ಕಾಗಿ ಶಸ್ತ್ರಾಸ್ತ್ರ ಪಡೆಯಲು ಚೀನಾದ ಹಣಕಾಸು ಸಂಸ್ಥೆಗಳು ರಷ್ಯಾಕ್ಕೆ ನೆರವು ನೀಡಿರುವ ಬಗ್ಗೆಯೂ ಎಚ್ಚರಿಕೆ ನೀಡಲಾಗಿದೆ.

<><*<><>*><>

ಗುಜರಾತಿನ ಭುಜ್‌ನಲ್ಲಿ ನಿರ್ಮಿಸಲಾಗಿರುವ ಸ್ಮೃತಿವನ ಭೂಕಂಪ ಸ್ಮಾರಕ ಸಂಗ್ರಹಾಲಯಕ್ಕೆ ಯುನೆಸ್ಕೋದ ಪ್ರತಿಷ್ಠಿತ ಪ್ರಿಕ್ಸ್ ವರ್ಸಲಿಸ್ ಪ್ರಶಸ್ತಿ ಪ್ರಕಟಿಸಲಾಗಿದ್ದು, ಈ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಂತಸ ವ್ಯಕ್ತಪಡಿಸಿದ್ದಾರೆ.

೨೦೦೧ರಲ್ಲಿ ಸಂಭವಿಸಿದ ಭೂಕಂಪದಲ್ಲಿ ಪ್ರಾಣ ಕಳೆದುಕೊಂಡವರ ಗೌರವಾರ್ಥ ನಿರ್ಮಿಸಲಾಗಿರುವ ಈ ಸ್ಮೃತಿವನ ಮಾನವ ಧೈರ್ಯ ಶೌರ್ಯದ ಪ್ರತೀಕವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ತಿಳಿಸಿದ್ದಾರೆ.

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಜಮ್ಮು ಮತ್ತು ಕಾಶ್ಮೀರದ ಭದ್ರತಾ ಪರಿಸ್ಥಿತಿ ಪರಿಶೀಲನೆ ಹಾಗೂ ಅಮರ್‌ನಾಥ್ ಯಾತ್ರೆ ಸಿದ್ಧತೆ ಬಗ್ಗೆ ನಾಳೆ ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ. ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಕೇಂದ್ರ ಗೃಹ ಕಾರ್ಯದರ್ಶಿ, ಸೇನೆ, ಪೊಲೀಸ್ ಹಾಗೂ ಜಮ್ಮು-ಕಾಶ್ಮೀರದ ಹಿರಿಯ ಆಡಳಿತಗಾರರು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿನ ನೀರು ಪೂರೈಕೆ ಸಮಸ್ಯೆ ಕುರಿತಂತೆ ದೆಹಲಿ ಸರ್ಕಾರದ ವಿರುದ್ಧ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷಗಳು ಇಂದು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದವು. ದೆಹಲಿ ಜಲ ಖಾತೆ ಸಚಿವೆ ಅತಿಶಿ ನಿವಾಸದ ಎದುರು ಮಟ್ಕಿ ಫೋಡ್ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ನಗರದಲ್ಲಿನ ನೀರು ಪೂರೈಕೆ ಸಮಸ್ಯೆ ಬಗೆಹರಿಸುವಲ್ಲಿ ದೆಹಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಕೇಂದ್ರ ಸಚಿವ ಗಜೇಂದ್ರ ಶೇಖಾವತ್ ಮಾತನಾಡಿ, ದೆಹಲಿ ಸರ್ಕಾರ ನೀರು ವಿತರಣಾ ವ್ಯವಸ್ಥೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಹೇಳಿದರು. ಕಾಂಗ್ರೆಸ್ ಕೂಡ ದೆಹಲಿಯ ೨೮೦ ವಿವಿಧ ಸ್ಥಳಗಳಲ್ಲಿ ದೆಹಲಿ ಸರ್ಕಾರದ ವಿರುದ್ಧ ಮಟ್ಕಿ ಫೋಡ್ ಪ್ರತಿಭಟನೆ ನಡೆಸಿತು. ದೆಹಲಿ ಕಾಂಗ್ರೆಸ್ ಅಧ್ಯಕ್ಷ ದೇವೇಂದ್ರ ಯಾದವ್ ನೇತೃತ್ವದಲ್ಲಿ ಪ್ರತಿಭಟನಾಕಾರರು, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ರಾಜಿನಾಮೆಗೆ ಒತ್ತಾಯಿಸಿದರು. ಈ ಮಧ್ಯೆ ದೆಹಲಿ ಜಲ ಖಾತೆ ಸಚಿವೆ ಅತಿಶಿ ಅವರು, ನೀರು ಪೂರೈಕೆ ಸಮಸ್ಯೆ ಕುರಿತಂತೆ ತುರ್ತು ಸಭೆಯನ್ನು ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ದೆಹಲಿ ಜಲ ಮಂಡಳಿ ಟ್ಯಾಂಕರ್‌ಗಳ ಮೂಲಕ ಪ್ರತಿದಿನ ೧೦ ಮಿಲಿಯನ್ ಗ್ಯಾಲನ್ ನೀರು ಪೂರೈಸುತ್ತಿದೆ. ಹೆಚ್ಚಿನ ಸಂಖ್ಯೆ ಟ್ಯಾಂಕರ್ ನೀರು ಅವಶ್ಯಕತೆ ಇರುವ ಸ್ಥಳಗಳನ್ನು ಗುರುತಿಸಲಾಗುತ್ತಿದೆ ಸಚಿವೆ ತಿಳಿಸಿದರು.

**<><*<><>*><>**

ಕೇಂದ್ರ ಸಾಹಿತ್ಯ ಅಕಾಡೆಮಿ ೨೦೨೪ನೇ ಸಾಲಿನ ಬಾಲ ಸಾಹಿತ್ಯ ಪುರಸ್ಕಾರ ಹಾಗೂ ಯುವ ಪುರಸ್ಕಾರಗಳನ್ನು ಪ್ರಕಟಿಸಿದೆ. ಬಾಲ ಸಾಹಿತ್ಯ ಪುರಸ್ಕಾರಕ್ಕೆ ಒಟ್ಟು ೨೪ ಹಾಗೂ ಯುವ

ಸಾಹಿತ್ಯ ಪುರಸ್ಕಾರಕ್ಕೆ ೨೩ ಸಾಹಿತಿಗಳು ಆಯ್ಕೆಯಾಗಿದ್ದಾರೆ. ಈ ಪುರಸ್ಕಾರ ೫೦ ಸಾವಿರ ರೂಪಾಯಿ ಹಾಗೂ ಫಲಕ ಒಳಗೊಂಡಿದೆ.

<><*<><>*><>

ಮುಂಬೈ ೧೮ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನ್ಯಾಷನಲ್ ಜಾಗ್ರಫಿಕ್‌ನ ಬಿಲ್ಲಿ ಅಂಡ್ ಮೊಲ್ಲಿ ಅನ್ ಓಟ್ಟೆರ್ ಲವ್ ಸ್ಟೋರಿ ಸಾಕ್ಷ್ಯಚಿತ್ರ ಪ್ರದರ್ಶನದೊಂದಿಗೆ ಆರಂಭವಾಯಿತು. ದೆಹಲಿ, ಚೆನ್ನೈ, ಕೊಲ್ಕತ್ತಾ, ಪುಣೆಗಳಲ್ಲಿಯೂ ಕೂಡ ಸಮಾನಂತರವಾಗಿ ಈ ಪ್ರದರ್ಶನ ನಡೆಯಿತು. ಒಟ್ಟು ೫೯ ದೇಶಗಳ ೬೧ ಭಾಷೆಗಳ ೩೧೪ ಚಿತ್ರಗಳನ್ನು ಆರು ದಿನಗಳ ಕಾಲ ನಡೆಯಲಿರುವ ಈ ಚಿತ್ರೋತ್ಸವದಲ್ಲಿ ಪ್ರದರ್ಶಿಸಲಾಗುತ್ತಿದೆ.

<><*<><>*><>

ಹೆಸರಾಂತ ವನ್ಯಜೀವಿ ಚಿತ್ರ ನಿರ್ಮಾಪಕ ಚೆನ್ನೈ ಸುಬ್ಬಯ್ಯ ನಲ್ಲಮುತ್ತು ಅವರಿಗೆ ಪ್ರತಿಷ್ಠಿತ ವಿ.ಶಾಂತರಾಮ್ ಜೀವಮಾನ ಸಾಧನೆ ಪ್ರಶಸ್ತಿ ಪ್ರಕಟಿಸಲಾಗಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್, ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿಂದು ಈ ವಿಷಯ ಪ್ರಕಟಿಸಿದ್ದಾರೆ. ಸುಬ್ಬಯ್ಯ ನಲ್ಲಮುಥು ಅವರು, 'ಲಿವಿಂಗ್ ಆನ್ ದ ಎಡ್ಜ್' ವನ್ಯಜೀವಿ ಸರಣಿ ಸಂಚಿಕೆಗಳನ್ನು ನಿರ್ಮಿಸಿದ್ದಾರೆ. ಈ ಸಂದರ್ಭದಲ್ಲಿ ಆಕಾಶವಾಣಿಯೊಂದಿಗೆ ಮಾತನಾಡಿದ ಡಾ.ಎಲ್.ಮುರುಗನ್ ಅವರು, ಇದೇ ಮೊದಲ ಬಾರಿಗೆ ಈ ವರ್ಷ ಸಾಕ್ಷ್ಯ ಚಿತ್ರ ಬಜಾರ್ ಕೂಡ ವ್ಯವಸ್ಥೆ ಮಾಡಲಾಗಿದೆ ಎಂದರು. ಇದು ಚಿತ್ರ ನಿರ್ಮಾಪಕರಿಗೆ ಕೊಡು-ಕೊಳ್ಳುವವರಿಗೆ ಹಾಗೂ ಪ್ರಾಯೋಜಕರಿಗೆ ವೇದಿಕೆಯಾಗುವ ಮೂಲಕ ಚಿತ್ರ ನಿರ್ಮಾಣಕ್ಕೆ ನೆರವಾಗಲಿದೆ ಎಂದರು.

<><*<><>*><>

ಉತ್ತರಾಖಂಡನ ರುದ್ರಪ್ರಯಾಗ್ ಜಿಲ್ಲೆಯಲ್ಲಿ ಇಂದು ಸಂಭವಿಸಿದ ರಸ್ತೆ ಅಪಘಾತದಲ್ಲಿ ಕನಿಷ್ಠ ೧೩ ಪ್ರವಾಸಿಗರು ಮೃತಪಟ್ಟಿದ್ದಾರೆ. ಗಾಯಗೊಂಡಿರುವ ೭ ಯಾತ್ರಾರ್ಥಿಗಳನ್ನು ಚಿಕಿತ್ಸೆಗಾಗಿ ಹೃಷಿಕೇಶದ ಏಮ್ಸ್ ಆಸ್ಪತ್ರೆಗೆ ವಿಮಾನದ ಮೂಲಕ ಸಾಗಿಸಲಾಗಿದೆ. ರುದ್ರ ಪ್ರಯಾಗ್ ಜಿಲ್ಲೆಯ ರೈನ್‌ತೋಲಿ ಬಳಿ ಬದರಿನಾಥ್ ರಾಷ್ಟ್ರೀಯ ಹೆದ್ದಾರಿಯಲ್ಲಿ ೨೬ ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ವಾಹನ ಕಮರಿಗೆ ಬಿದ್ದು, ಈ ಅಪಘಾತ ಸಂಭವಿಸಿದೆ ಎಂದು ವರದಿ ತಿಳಿಸಿದೆ. ಸುದ್ದಿ ತಿಳಿದ ಕೂಡಲೇ ಜಿಲ್ಲಾ ಪೊಲೀಸ್ ಅಗ್ನಿ ಶಾಮಕ ದಳ ಹಾಗೂ ನೈಸರ್ಗಿಕ ವಿಕೋಪ ನಿರ್ವಹಣಾ ತಂಡಗಳು ಸ್ಥಳಕ್ಕೆ ಧಾವಿಸಿ, ರಕ್ಷಣಾ ಕಾರ್ಯಾಚರಣೆ ನಡೆಸಿದವು. ರಾಷ್ಟ್ರಪತಿ ದ್ರೌಪದಿ ಮುರ್ಮು ಈ ಘಟನೆಯಲ್ಲಿ ಮೃತಪಟ್ಟವರ ಬಗ್ಗೆ ಶೋಕ ವ್ಯಕ್ತಪಡಿಸಿದ್ದಾರೆ. ಗಾಯಗೊಂಡವರು ಶೀಘ್ರವಾಗಿ

ಗುಣಮುಖರಾಗಲಿ ಎಂದು ಸಾಮಾಜಿಕ ಮಾಧ್ಯಮದಲ್ಲಿ ಹಾರೈಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಉತ್ತರಾಖಂಡದ ರಾಜ್ಯಪಾಲ ಗುರ್ಮೀತ್ ಸಿಂಗ್, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಮಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

<><*<><>*><>

ಉತ್ತರಖಂಡ್ ಘಟನೆ ಕುರಿತಂತೆ ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಶೋಕ ವ್ಯಕ್ತಪಡಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಘಟನೆ ಬಗ್ಗೆ ದುಃಖ ಪಡಿಸಿದ್ದಾರೆ. ಮೃತಪಟ್ಟವರ ಕುಟುಂಬಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ನೆರವು ಪ್ರಕಟಿಸಿದ್ದಾರೆ. ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಸಹಾಯ ಪ್ರಕಟಿಸಿದ್ದು, ಶೀಘ್ರವಾಗಿ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.

<><*<><>*><>

ಛತ್ತೀಸ್‌ಗಢದ ಬಸ್ತಾರ್ ವಿಭಾಗದಲ್ಲಿ ಭದ್ರತಾಪಡೆ ಜೊತೆಗೆ ನಡೆಸಿದ ಗುಂಡಿನ ಚಕಮಕಿಯಲ್ಲಿ ಕನಿಷ್ಠ ೮ ಜನ ಮಾವೋವಾದಿಗಳು ಹತರಾಗಿದ್ದಾರೆ. ವಿಶೇಷ ಕಾರ್ಯಪಡೆಯ ಓರ್ವ ಸಿಬ್ಬಂದಿ ಮೃತಪಟ್ಟಿದ್ದು, ಇಬ್ಬರಿಗೆ ಗಾಯಗಳಾಗಿವೆ. ಬಸ್ತಾರ್ ವಿಭಾಗದ ಅಬುಜ್‌ಮದ್ ಪ್ರದೇಶದಲ್ಲಿ ಮಾವೋವಾದಿ ಚಟುವಟಿಕೆ ಬಗ್ಗೆ ನಿಖರ ಮಾಹಿತಿ ಪಡೆದ ವಿಶೇಷ ಕಾರ್ಯಪಡೆ, ಗಡಿ ಭದ್ರತಾ ಪಡೆ, ಐಟಿಬಿಪಿ ಮತ್ತು ಜಿಲ್ಲಾ ಕಾಯ್ದಿಟ್ಟ ಪಡೆ ಈ ಜಂಟಿ ಕಾಯಾಚರಣೆ ನಡೆಸಿದವು. ಸ್ಥಳದಿಂದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ.

<><*<><>*><>

ಅರುಣಾಚಲ ಪ್ರದೇಶದ ಮುಖ್ಯಮಂತ್ರಿ ಪ್ರೇಮಾ ಖಂಡು, ತಮ್ಮ ಮಂತ್ರಿಮಂಡಳದ ಸದಸ್ಯರಿಗೆ ಖಾತೆಗಳ ಹಂಚಿಕೆ ಮಾಡಿದ್ದಾರೆ. ಉಪಮುಖ್ಯಮಂತ್ರಿ ಚೌವ್ನಾ ಮೀನ್ ಹಣಕಾಸು ಯೋಜನೆ ಮತ್ತು ಬಂಡವಾಳ ಹೂಡಿಕೆ ಹಾಗೂ ವಿದ್ಯುತ್‌ಚ್ಛಕ್ತಿ ಖಾತೆಯಲ್ಲಿ ಮುಂದುವರೆಯಲಿದ್ದಾರೆ. ಮಾಜಿ ಸ್ಪೀಕರ್ ಪಸಾಂಗ್ ದೊರ್ಜೀ ಸೋನಾ ಶಿಕ್ಷಣ ಮತ್ತು ಗ್ರಾಮೀಣ ಕಾಮಗಾರಿ, ಬಿಯುರಾಮ್ ವಾಹ್‌ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವಾಂಕಿ ಲೊವಾಂಗ್ ಪರಿಸರ ಮತ್ತು ಅರಣ್ಯ ಖಾತೆ ಹೊಂದಿರುತ್ತಾರೆ.

<><*<><>*><>

ಅಮೆರಿಕಾದ ಫ್ಲೋರಿಡಾದ ಸೆಂಟ್ರಲ್ ಬ್ರೋವರ್ಡ್ ಪಾರ್ಕ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯ ಎ ಗುಂಪಿನ ಪಂದ್ಯದಲ್ಲಿ ಭಾರತ ಮತ್ತು ಕೆನಡಾ ತಂಡಗಳು ಸೆಣಸಲಿವೆ. ಭಾರತಕ್ಕೆ ಇದು ಗುಂಪು ಹಂತದ ಕೊನೆಯ ಪಂದ್ಯವಾಗಿದೆ. ಭಾರತೀಯ ಕಾಲಮಾನದ ಪ್ರಕಾರ ರಾತ್ರಿ ೮ ಗಂಟೆಗೆ ಪಂದ್ಯ ಆರಂಭವಾಗಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **<>*><>**